# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ನಗರೋತ್ಥಾನ ಯೋಜನೆಯಡಿಯಲ್ಲಿ ಕೆಂಬಾವಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ 41ಎ-14ಗುಂ. ಜಮೀನನ್ನು ನೀರು ಶೇಖರಿಸಲು ಹಸ್ತಾಂತರಿಸುವ ಬಗ್ಗೆ.

****

**ಓದಲಾಗಿದೆ:-**
1. ಪತ್ರ ಸಂಖ್ಯೆ:ವ್ಯನಿ/ಕೃಭಾಜನಿನಿ/ತಾಂ/ಸ.ಇಂ-3/17/2018-19/2194 ದಿನಾಂಕ:16/09/2019
2. ಕಂದಾಯ ಇಲಾಖೆಯ ಆದೇಶ ಸಂಖ್ಯೆ:ಆರ್‌ಡಿ 32 ಎಲ್‌ಜಿಪಿ 2020 ದಿನಾಂಕ:17/03/2020.
3. ಸರ್ಕಾರದ ದಿನಾಂಕ:01/10/2020ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಮಿತಿಯ ಸಭೆಯ ನಡವಳಿ.

**ಪ್ರಸ್ತಾವನೆ:-**

ಮೇಲೆ ಓದಲಾದ (1) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರು ನಗರೋತ್ಥಾನ ಯೋಜನೆಯಡಿಯಲ್ಲಿ ಕೆಂಬಾವಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದ ವ್ಯಾಪ್ತಿಗೆ ಒಳಪಡುವ ಸುರಪುರ ತಾಲ್ಲೂಕಿನ ಯಾಳಗಿ ಗ್ರಾಮದಲ್ಲಿನ (1) ಸರ್ವೆ ನಂ.590 ರಲ್ಲಿ 26ಎ-24ಗುಂಟೆ ಹಾಗೂ (2) ಸರ್ವೆ ನಂ.597ರಲ್ಲಿ 14ಎ-30ಗುಂಟೆ ಜಮೀನಿನಲ್ಲಿ ಟ್ಯಾಂಕ್ ನಿರ್ಮಾಣ ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹಸ್ತಾಂತರಿಸುವ ಪ್ರಸ್ತಾವನೆ ಕುರಿತಂತೆ ದಿನಾಂಕ:09/07/2019 ರಂದು ಜರುಗಿದ ನಿಗಮದ 121ನೇ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ಮಂಡಿಸಿದ್ದು, ಪ್ರಸ್ತಾಪಿತ ಜಮೀನನ್ನು ಲೀಜ್ ಆಧಾರದ ಮೇಲೆ ಜಲ ಸಂಪನ್ಮೂಲ ಇಲಾಖೆಯ ಮೂಲಕ ಕಂದಾಯ ಇಲಾಖೆಯ ಸಹಮತಿಯನ್ನು ಪಡೆದು ಹಸ್ತಾಂತರಿಸಲು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ (KUWS&DB) ನೀರು ಶೇಖರಿಸಲು ನೀಡಿದ ಜಮೀನನ್ನು 25 ವರ್ಷದ ಲೀಜ್ ಅವಧಿ ಮುಗಿದ ನಂತರ ಯಥಾಸ್ಥಿತಿಯಲ್ಲಿ ಜಮೀನನ್ನು ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ ಹಸ್ತಾಂತರಿಸುವ ಷರತ್ತು ವಿಧಿಸಲು ಮಂಡಳಿಯು ಶಿಫಾರಸ್ಸು ಮಾಡಿರುವುದಾಗಿ ವರದಿ ಮಾಡಿರುತ್ತಾರೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ "ಸರ್ಕಾರದ ಒಂದು ಇಲಾಖೆ/ ನಿಗಮ/ ಮಂಡಳಿಯ ವಶದಲ್ಲಿರುವ ಭೂಮಿಯನ್ನು ಮತ್ತೊಂದು ಇಲಾಖೆ/ನಿಗಮ/ಮಂಡಳಿಯ ವಶಕ್ಕೆ ಹಸ್ತಾಂತರ ಮಾಡುವ ಪ್ರಸ್ತಾವನೆಗಳಿಗೆ ಸೂಕ್ತ ನಿರ್ಣಯ ತೆಗೆದುಕೊಳ್ಳಲು" ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ (3) ರ ಮಾನ್ಯ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:1/10/2020 ರಂದು ಜರುಗಿದ ಸಮಿತಿ ಸಭೆಯ ನಡವಳಿಯಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ಕೆಂಬಾವಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ

ಕೃಷ್ಣಾ ಭಾಗ್ಯ ಜಲ ನಿಗಮದ ವ್ಯಾಪ್ತಿಯಲ್ಲಿನ 41ಎ–14 ಗುಂಟೆ ಜಮೀನನ್ನು ನೀರು ಶೇಖರಿಸಲು ಲೀಸ್ ಆಧಾರದ ಮೇಲೆ ಹಸ್ತಾಂತರಿಸುವ ಬಗ್ಗೆ ಚರ್ಚಿಸಲಾಗಿ, ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಯಾಳಗಿ ಗ್ರಾಮದ (1) ಸರ್ವೆ ನಂ.590ರಲ್ಲಿ 26ಎ–24ಗುಂಟೆ ಹಾಗೂ (2) ಸರ್ವೆ ನಂಬರ್ 597ರಲ್ಲಿ 14ಎ–30ಗುಂಟೆ ಖಾಲಿ ಜಮೀನನ್ನು ನಗರಾಭಿವೃದ್ಧಿ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು ಕಂದಾಯ ಇಲಾಖೆಯು ಸಹಮತಿ ನೀಡಬಹುದಾಗಿದೆ ಎಂದು ತೀರ್ಮಾನಿಸಲಾಗಿರುತ್ತದೆ.

ಅದರಂತೆ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 46 ಕೆಬಿಎನ್ 2019, ಬೆಂಗಳೂರು, ದಿನಾಂಕ:08/02/2021.**

ನಗರೋತ್ಥಾನ ಯೋಜನೆಯಡಿಯಲ್ಲಿ ಕೆಂಬಾವಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ನೀರು ಶೇಖರಿಸಲು ಕೃಷ್ಣಾ ಭಾಗ್ಯ ಜಲ ನಿಗಮದ ವ್ಯಾಪ್ತಿಯಲ್ಲಿನ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಯಾಳಗಿ ಗ್ರಾಮದ (1) ಸರ್ವೆ ನಂ.590ರಲ್ಲಿ 26ಎ–24ಗುಂಟೆ ಹಾಗೂ (2) ಸರ್ವೆ ನಂಬರ್ 597ರಲ್ಲಿ 14ಎ–30ಗುಂಟೆ ಖಾಲಿ ಜಮೀನನ್ನು ನಗರಾಭಿವೃದ್ಧಿ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಿ ಆದೇಶಿಸಿದೆ.

ಈ ಆದೇಶವನ್ನು ಕಂದಾಯ ಇಲಾಖೆಯು ಕಡತ ಸಂಖ್ಯೆ:ಆರ್‌ಡಿ 37 ಎಲ್‌ಜಿಜಿ 2020 ದಿನಾಂಕ:14/10/2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
8/2/2021
**(ರವೀಂದ್ರ ಕೊಂಡ)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–5)
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಆಡಿಟ್), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ. ಬಹುಮಹಡಿಗಳ ಕಟ್ಟಡ. ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಇ–ಆಕೋ)
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಜ ಸಂ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
9. ಸರ್ಕಾರದ ಕಾರ್ಯದರ್ಶಿಗಳು, ಜ ಸಂ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
10. ಹೆಚ್ಚುವರಿ ಕಾರ್ಯದರ್ಶಿಗಳು, ಜ ಸಂ ಇಲಾಖೆ ಇವರ ಆಪ್ತ ಸಹಾಯಕರು,
11. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ) ಜ ಸಂ ಇಲಾಖೆ ಇವರ ಆಪ್ತ ಸಹಾಯಕರು,
12. ಶಾಖಾ ರಕ್ಷಕ ಕಡತ/ ಹೆಚ್ಚಿನ ಪ್ರತಿಗಳು.